## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರೀ ಚನ್ನಪ್ಪ, ಮಾಜಿ ಅಧ್ಯಕ್ಷರು, ಹಾಲಿ ಸದಸ್ಯರು, ಚಟ್ನಹಳ್ಳಿ ಗ್ರಾಮ ಪಂಚಾಯತಿ, ಹೊನ್ನಾಳಿ ತಾಲ್ಲೂಕು, ದಾವಣಗೆರೆ ಜಿಲ್ಲೆ ಇವರ ವಿರುದ್ಧ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993 ಪ್ರಕರಣ 43(ಎ) ರನ್ವಯ ಕ್ರಮ ಜರುಗಿಸುವ ಬಗ್ಗೆ.

**ಓದಲಾಗಿದೆ:**

1. ಮುಖ್ಯ ಕಾರ್ಯನಿರ್ವಾಹಕಾಧಿಕಾರಿ, ಜಿಲ್ಲಾ ಪಂಚಾಯಿತಿ ದಾವಣಗೆರೆ ರವರ ಪತ್ರ ಜಿಪಂದಾಆ (2):ಸಿಸಿಎ:ಸಿಆರ್:06/2017-18, ದಿನಾಂಕ:16-05-2017.
2. ಮುಖ್ಯ ಕಾರ್ಯನಿರ್ವಾಹಕಾಧಿಕಾರಿ, ಜಿಲ್ಲಾ ಪಂಚಾಯಿತಿ ದಾವಣಗೆರೆ ರವರ ಪತ್ರ ಜಿಪಂದಾಆ (2):ಗ್ರಾಪಂ:ಸಿಆರ್:141/2017-18, ದಿನಾಂಕ:12-06-2017.
3. ಸರ್ಕಾರದ ಇದೇ ಸಮಸಂಖ್ಯೆಯ ದಿನಾಂಕ:07-07-2017 ಮತ್ತು 19-07-2017 ರ ಕಾರಣ ಕೇಳುವ ನೋಟೀಸು.
4. ಶ್ರೀ ಚನ್ನಪ್ಪ, ಮಾಜಿ ಅಧ್ಯಕ್ಷರು, ಹಾಲಿ ಸದಸ್ಯರು, ಚಟ್ನಹಳ್ಳಿ ಗ್ರಾಮ ಪಂಚಾಯತಿ, ಹೊನ್ನಾಳಿ ತಾಲ್ಲೂಕು, ದಾವಣಗೆರೆ ಜಿಲ್ಲೆ ಇವರ ದಿನಾಂಕ:04-09-2017 ರ ಲಿಖಿತ ಹೇಳಿಕೆ.
5. ಸರ್ಕಾರದ ಸಮಸಂಖ್ಯೆಯ ವಿಚಾರಣಾ ನೋಟೀಸ್, ದಿನಾಂಕ:28-10-2017.

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ (1)ರಲ್ಲಿ ಮುಖ್ಯ ಕಾರ್ಯನಿರ್ವಾಹಕಾಧಿಕಾರಿ, ಜಿಲ್ಲಾ ಪಂಚಾಯಿತಿ ದಾವಣಗೆರೆ ರವರ ಪ್ರಸ್ತಾವನೆಯಲ್ಲಿ ಈ ಕೆಳಕಂಡಂತೆ ತಿಳಿಸಿರುತ್ತಾರೆ.

ದಾವಣಗೆರೆ ಜಿಲ್ಲೆ, ಹೊನ್ನಾಳಿ ತಾಲ್ಲೂಕು, ಚಟ್ನಹಳ್ಳಿ ಗ್ರಾಮ ಪಂಚಾಯತಿಯಲ್ಲಿ 2015-16ನೇ ಸಾಲಿನಲ್ಲಿ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ನಿರ್ವಹಿಸಿದ ದನದ ಕೊಟ್ಟಿಗೆ ನಿರ್ಮಾಣ ಕಾಮಗಾರಿಗಳ ಅನುಷ್ಠಾನದಲ್ಲಿ ಅವ್ಯವಹಾರ ನಡೆದಿರುವ ಬಗ್ಗೆ ದೂರು ಬಂದ ಹಿನ್ನಲೆಯಲ್ಲಿ ಸಹಾಯಕ ಯೋಜನಾಧಿಕಾರಿ (ಡಿ.ಆರ್.ಡಿ.ಎ.) & (ಎಸ್.ಜಿ.ಎಸ್.ವೈ.) ರವರಿಂದ ತನಿಖೆ ನಡೆಸಿ, 08 ದನದ ಕೊಟ್ಟಿಗೆ ನಿರ್ಮಾಣ ಕಾಮಗಾರಿಗಳಿಗೆ ರೂ.92,008/-ಗಳಿಗೆ ಹಣ ಪಾವತಿಸಿ ಸರ್ಕಾರದ ಹಣ ದುರುಪಯೋಗವಾಗಿರುವುದು ತನಿಖಾ ವರದಿಯಿಂದ ಕಂಡುಬಂದಿದ್ದು, ಶ್ರೀ ಚನ್ನಪ್ಪ, ಅಧ್ಯಕ್ಷರು, ಚಟ್ನಹಳ್ಳಿ ಗ್ರಾಮ ಪಂಚಾಯತಿ ಇವರು ಪರೋಕ್ಷವಾಗಿ ಸಹಕರಿಸಿರುವುದು ಕಂಡುಬರುತ್ತದೆ. ಆದ್ದರಿಂದ ಅಧ್ಯಕ್ಷರಾದ ಶ್ರೀ ಚನ್ನಪ್ಪ ರವರು ಜವಾಬ್ದಾರರಾಗಿರುವುದರಿಂದ ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 43(ಎ) ಮತ್ತು 48(4) ಅಡಿ ಕ್ರಮ ಜರುಗಿಸುವಂತೆ ಕೋರಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2) ರಲ್ಲಿ ಮುಖ್ಯ ಕಾರ್ಯನಿರ್ವಾಹಕಾಧಿಕಾರಿ, ಜಿಲ್ಲಾ ಪಂಚಾಯಿತಿ ದಾವಣಗೆರೆ ರವರ ಪ್ರಸ್ತಾವನೆಯಲ್ಲಿ ಈ ಕೆಳಕಂಡಂತೆ ತಿಳಿಸಿರುತ್ತಾರೆ.

2016-17ನೇ ಸಾಲಿನಲ್ಲಿ 14ನೇ ಹಣಕಾಸಿನ ಯೋಜನೆಯ ಅನುಷ್ಠಾನದಲ್ಲಿ ಅವ್ಯವಹಾರ ನಡೆದಿರುವ ಬಗ್ಗೆ ದೂರು ಬಂದ ಹಿನ್ನಲೆಯಲ್ಲಿ ಸಹಾಯಕ ಯೋಜನಾಧಿಕಾರಿ (ಡಿ.ಆರ್.ಡಿ.ಎ.)ರವರಿಂದ ತನಿಖೆ ನಡೆಸಿ, 2016-17ನೇ ಸಾಲಿನಲ್ಲಿ 14ನೇ ಹಣಕಾಸು ಯೋಜನೆಗೆ ರೂ.20.00 ಲಕ್ಷಗಳಿಗೆ ಕ್ರಿಯಾ ಯೋಜನೆ ಅನುಮೋದನೆಯಾಗಿದ್ದು, ಸದರಿ ಯೋಜನೆಯಡಿ ಒಟ್ಟು 14 ಕಾಮಗಾರಿಗಳನ್ನು ತೆಗೆದುಕೊಂಡಿದ್ದು, ಈ ಕಾಮಗಾರಿಗಳ ಅನುಷ್ಠಾನದಲ್ಲಿ ಗ್ರಾಮ ಪಂಚಾಯತಿ ಜಿ.ಎಸ್.ಕೆ.ಯಲ್ಲಿ ಅಳವಡಿಸದೇ ಹಾಗೂ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕತೆ ನಿಯಮವನ್ನು ಪಾಲಿಸದೆ ರೂ.2,36,079/-ಗಳನ್ನು ಪಾವತಿಸಿ ಸರ್ಕಾರದ ಹಣ ದುರುಪಯೋಗವಾಗಿರುವುದು ವರದಿಯಿಂದ ಕಂಡುಬಂದಿದ್ದು, ಈ ಕಾಮಗಾರಿಗಳ ಅನುಷ್ಠಾನಕ್ಕೆ ಸಂಬಂಧಿಸಿದಂತೆ ದಾಖಲೆಗಳನ್ನು ನಿರ್ವಹಿಸದೆ ರೂ.11,40,248/-ಗಳನ್ನು ಪಾವತಿಸಿದ ಮೊತ್ತವನ್ನು ಆಕ್ಷೇಪಣೆಯಲ್ಲಿ ಇಡಲಾಗಿದ್ದು, ಶ್ರೀ ಚನ್ನಪ್ಪ, ಮಾಜಿ ಅಧ್ಯಕ್ಷರು, ಹಾಲಿ ಸದಸ್ಯರು, ಚಟ್ನಹಳ್ಳಿ ಗ್ರಾಮ ಪಂಚಾಯತಿ ಇವರು ಪರೋಕ್ಷವಾಗಿ ಸಹಕರಿಸಿರುವುದರಿಂದ ಕಂಡುಬರುತ್ತದೆ.

2..

ಆದ್ದರಿಂದ ಅಧ್ಯಕ್ಷರಾದ ಶ್ರೀ ಚನ್ನಪ್ಪ ರವರು ಜವಾಬ್ದಾರರಾಗಿರುವುದರಿಂದ ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 43(ಎ) ಮತ್ತು 48(4) ಅಡಿ ಕ್ರಮ ಜರುಗಿಸುವಂತೆ ಕೋರಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಲಾಗಿ ಮೇಲೆ ಓದಲಾದ ಕ್ರಮ ಸಂಖ್ಯೆ (3)ರಲ್ಲಿ ಶ್ರೀ ಚನ್ನಪ್ಪ, ಮಾಜಿ ಅಧ್ಯಕ್ಷರು, ಹಾಲಿ ಸದಸ್ಯರು ಇವರಿಗೆ ಕಾರಣ ಕೇಳುವ ನೋಟೀಸು ಜಾರಿ ಮಾಡಿ ಅವರ ವಿರುದ್ಧದ ಆರೋಪಗಳಿಗೆ ಸಂಬಂಧಿಸಿದಂತೆ ಅವರ ಸಮಜಾಯಿಷಿ ಕೇಳಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (4)ರಲ್ಲಿ ಶ್ರೀ ಚನ್ನಪ್ಪ, ಮಾಜಿ ಅಧ್ಯಕ್ಷರು, ಹಾಲಿ ಸದಸ್ಯರು ಇವರು ಸಲ್ಲಿಸಿರುವ ಉತ್ತರದಲ್ಲಿ ನನ್ನ ಸೇವಾ ಅವಧಿಯಲ್ಲಿ ಸರ್ಕಾರದಿಂದ ಬಿಡುಗಡೆಯಾದ ಹಣವನ್ನು ನಿಯಮಾನುಸಾರ ವಿನಿಯೋಗಿಸಿರುತ್ತೇನೆ. ಯಾವುದೇ ಹಣ ದುರುಪಯೋಗ ಮಾಡಿಕೊಂಡಿರುವುದಿಲ್ಲ. ಬಳಕೆ ಮಾಡಿರುವ ಹಣಗಳ ಬಗ್ಗೆ ದಾಖಲೆಗಳನ್ನು ಇಟ್ಟಿದ್ದು ನನ್ನ ಮೇಲೆ ಮಾಡಿರುವ ಆರೋಪಗಳಿಂದ ಮುಕ್ತಮಾಡಬೇಕೆಂದು ಕೋರಿರುತ್ತಾರೆ.

ಮೇಲೆ ಓದಲಾದ (5)ರಲ್ಲಿ ಶ್ರೀ ಚನ್ನಪ್ಪ, ಮಾಜಿ ಅಧ್ಯಕ್ಷರು, ಹಾಲಿ ಸದಸ್ಯರು ಇವರನ್ನು ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಮಾನ್ಯ ಪ್ರಧಾನ ಕಾರ್ಯದರ್ಶಿ(ಪಂ.ರಾಜ್) ರವರ ನ್ಯಾಯಾಲಯದಲ್ಲಿ ವಿಚಾರಣೆ ಕರೆಯಲಾಗಿ ದಿನಾಂಕ:09–11–2017 ರಂದು ಜರುಗಿದ ವಿಚಾರಣೆಯಲ್ಲಿ ಸಹಾಯಕ ಕಾರ್ಯದರ್ಶಿ ಜಿಲ್ಲಾ ಪಂಚಾಯತಿ ದಾವಣಗೆರೆ ಮತ್ತು ಆಪಾದಿತ ಸದಸ್ಯರು ಹಾಜರಾಗಿರುತ್ತಾರೆ ಹಾಗೂ ತಮ್ಮ ಹೇಳಿಕೆ ಮತ್ತು ದಾಖಲೆಗಳನ್ನು ನೀಡಿರುತ್ತಾರೆ.

ಮುಖ್ಯ ಕಾರ್ಯನಿರ್ವಾಹಕಾಧಿಕಾರಿ, ಜಿಲ್ಲಾ ಪಂಚಾಯಿತಿ ದಾವಣಗೆರೆ ರವರ ಪ್ರಸ್ತಾವನೆಗಳು ಹಾಗೂ ಶ್ರೀ ಚನ್ನಪ್ಪ, ಮಾಜಿ ಅಧ್ಯಕ್ಷರು, ಹಾಲಿ ಸದಸ್ಯರು ಇವರು ನೀಡಿರುವ ಲಿಖಿತ ಹೇಳಿಕೆಗಳನ್ನು ಹಾಗೂ ಎಲ್ಲಾ ದಾಖಲೆಗಳನ್ನು ಪರಿಶೀಲಿಸಲಾಗಿ, ಇವರು ಪರೋಕ್ಷವಾಗಿ ಸರ್ಕಾರಕ್ಕೆ ನಷ್ಟ ಉಂಟು ಮಾಡಿದ್ದಲ್ಲಿ, ಸದರಿಯವರಿಂದ ಹಣ ವಸೂಲಿ ಮಾಡಲು ಆದೇಶಿಸಿ ಶ್ರೀ ಕೆ ಚನ್ನಪ್ಪ, ಮಾಜಿ ಅಧ್ಯಕ್ಷರು, ಹಾಲಿ ಸದಸ್ಯರು ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಕಾಯಿದೆ 1993 ಪ್ರಕರಣ 43(ಎ) ರಡಿ ಜರುಗಿಸಬೇಕಾದ ಕ್ರಮವನ್ನು ಕೈಬಿಟ್ಟು, ಪ್ರಕರಣವನ್ನು ಮುಕ್ತಾಯಗೊಳಿಸಲು ಸರ್ಕಾರವು ನಿರ್ಧರಿಸಿದೆ.

ಅದರಂತೆ ಈ ಆದೇಶ.

**<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 766 ಗ್ರಾಪಂಅ 2017 ಬೆಂಗಳೂರು, ದಿನಾಂಕ:09–04–2018.</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಕೆ ಚನ್ನಪ್ಪ, ಮಾಜಿ ಅಧ್ಯಕ್ಷರು, ಹಾಲಿ ಸದಸ್ಯರು, ಚಟ್ನಹಳ್ಳಿ ಗ್ರಾಮ ಪಂಚಾಯತಿ, ಹೊನ್ನಾಳಿ ತಾಲ್ಲೂಕು, ದಾವಣಗೆರೆ ಜಿಲ್ಲೆ ಇವರು ಪರೋಕ್ಷವಾಗಿ ಸರ್ಕಾರಕ್ಕೆ ನಷ್ಟ ಉಂಟು ಮಾಡಿದ್ದಲ್ಲಿ ಸದರಿಯವರಿಂದ ಹಣ ವಸೂಲಿ ಮಾಡಲು ಆದೇಶಿಸಿದೆ ಹಾಗೂ ಸದರಿಯವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಕಾಯಿದೆ 1993 ಪ್ರಕರಣ 43(ಎ) ರಡಿ ಪ್ರಾರಂಭಿಸಲಾದ ವಿಚಾರಣೆಯನ್ನು ಕೈಬಿಟ್ಟು, ಪ್ರಕರಣವನ್ನು ಮುಕ್ತಾಯಗೊಳಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

10/4/18

**(ಮುಬಾರಕ್ ಅಹ್ಮದ್),**
ಉಪನಿರ್ದೇಶಕರು ಮತ್ತು ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ:

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ ದಾವಣಗೆರೆ, ದಾವಣಗೆರ ಜಿಲ್ಲೆ.

2. ಕಾರ್ಯನಿರ್ವಾಹಕಾಧಿಕಾರಿ, ತಾಲ್ಲೂಕು ಪಂಚಾಯಿತಿ ಹೊನ್ನಾಳಿ, ದಾವಣಗೆರೆ ಜಿಲ್ಲೆ.
3. ಶ್ರೀ ಕೆ ಚನ್ನಪ್ಪ, ಮಾಜಿ ಅಧ್ಯಕ್ಷರು, ಹಾಲಿ ಸದಸ್ಯರು, ಚಟ್ನಹಳ್ಳಿ ಗ್ರಾಮ ಪಂಚಾಯತಿ, ಹೊನ್ನಾಳಿ ತಾಲ್ಲೂಕು, ದಾವಣಗೆರೆ ಜಿಲ್ಲೆ.
4. ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಚಟ್ನಹಳ್ಳಿ ಗ್ರಾಮ ಪಂಚಾಯತಿ, ಹೊನ್ನಾಳಿ ತಾಲ್ಲೂಕು, ದಾವಣಗೆರೆ ಜಿಲ್ಲೆ.
5. ಗಣಕ ಶಾಖೆ/ಕರ್ನಾಟಕ ವಿಕಾಸ.
6. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.